ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ:ರಾಚುಆ: 34 :ಟಿಜೆಡ್‌ಪಿ:2016

ನಂ.8, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ
ಮಾರಾಟ ಮಂಡಳಿ ಕಟ್ಟಡ (ಹಿಂಭಾಗ),
ಕನ್ನಿಂಗ್‌ಹ್ಯಾಮ್ ರಸ್ತೆ,
ಬೆಂಗಳೂರು, ದಿನಾಂಕ: 10-02-2016

## -: ಪತ್ರಿಕಾ ಪ್ರಕಟಣೆ :-

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಸಾರ್ವತ್ರಿಕ ಚುನಾವಣೆಗಳು, 2016 ರ ಮೊದಲನೇ ಹಂತದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ತುಮಕೂರು, ಬೆಳಗಾವಿ, ಬಾಗಲಕೋಟೆ, ಧಾರವಾಡ, ಹಾವೇರಿ, ಗದಗ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ದಿನಾಂಕ: 13-02-2016 ರಂದು ಮತದಾನ ನಡೆಯಲಿದೆ. ನಿಯಮಗಳನ್ವಯ ಚುನಾವಣಾ ಪ್ರಚಾರವು ಮತದಾನ ಪ್ರಾರಂಭವಾಗುವ 48 ಗಂಟೆಗಳ ಮುಂಚೆ ಅಂದರೆ, ದಿನಾಂಕ: 11-02-2016 ರ ಬೆಳಿಗ್ಗೆ 7-00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. ಆ ಸಮಯದ ನಂತರ ಯಾವುದೇ ರಾಜಕೀಯ ಪಕ್ಷವಾಗಲೀ ಅಥವಾ ಅಭ್ಯರ್ಥಿಗಳಾಗಲೀ ಅಥವಾ ಅವರ ಪರವಾಗಿ ಯಾರೇ ಆಗಲೀ ಬಹಿರಂಗ ಚುನಾವಣಾ ಪ್ರಚಾರ ಮಾಡುವಂತಿಲ್ಲ. ಅಲ್ಲದೆ, ಚುನಾವಣಾ ಪ್ರಚಾರದ ಜಾಹೀರಾತುಗಳನ್ನು ಪಕ್ಷದಿಂದಾಗಲೀ ಅಥವಾ ಅಭ್ಯರ್ಥಿಗಳಿಂದಾಗಲೀ ಅಥವಾ ಯಾವುದೇ ಮೂಲದಿಂದಾಗಲೀ ದಿನಪತ್ರಿಕೆಗಳಲ್ಲಿ, ದೂರದರ್ಶನ, ರೇಡಿಯೋ ಇತ್ಯಾದಿ ದೃಶ್ಯ ಮತ್ತು ಶ್ರವಣ ಮಾಧ್ಯಮಗಳಲ್ಲಿ ಪ್ರಕಟಿಸುವಂತಿಲ್ಲ.

(ಆರ್.ಚಂದ್ರಶೇಖರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ.

D:\MJ\Press Note.docx

ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ನಂ:8, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳ ಕಟ್ಟಡ (ಹಿಂಭಾಗ),
ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-560 052.

ವಿಷಯ: ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 – ಚುನಾವಣಾ ಪ್ರಚಾರಗಳನ್ನು ಮುಕ್ತಾಯಗೊಳಿಸುವ ಕುರಿತು.

* * * * *

ಪ್ರಸ್ತಾವನೆ:

ರಾಜ್ಯ ಚುನಾವಣಾ ಆಯೋಗವು ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 ರ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಚುನಾವಣಾ ವೇಳಾ ಪಟ್ಟಿಯಂತೆ ಮೊದಲನೇ ಹಂತದಲ್ಲಿ ಚುನಾವಣೆ ನಡೆಯಲಿರುವ ಜಿಲ್ಲೆಗಳಲ್ಲಿ ದಿನಾಂಕ: 13-02-2016 ರಂದು ಮತದಾನ ನಡೆಯಲಿದೆ. ಚುನಾವಣಾ ಪ್ರಚಾರವು ಮತದಾನ ಪ್ರಾರಂಭವಾಗುವ 48 ಗಂಟೆಗಳ ಮುಂಚೆ ಅಂದರೆ, ದಿನಾಂಕ: 11-02-2016 ರ ಬೆಳಿಗ್ಗೆ 7-00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿರುವ ಜಿಲ್ಲೆಗಳಲ್ಲಿ ದಿನಾಂಕ: 20-02-2016 ರಂದು ಮತದಾನ ನಡೆಯಲಿದೆ. ಚುನಾವಣಾ ಪ್ರಚಾರವು ಮತದಾನ ಪ್ರಾರಂಭವಾಗುವ 48 ಗಂಟೆಗಳ ಮುಂಚೆ ಅಂದರೆ, ದಿನಾಂಕ: 18-02-2016 ರ ಬೆಳಿಗ್ಗೆ 7-00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. ಚುನಾವಣೆಗಳನ್ನು ಮುಕ್ತ, ನ್ಯಾಯ ಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕಾಗಿರುವುದು ಅತ್ಯಾವಶ್ಯಕವಾಗಿರುತ್ತದೆ. ಈ ಸಂಬಂಧ ರಾಜಕೀಯ ಪಕ್ಷಗಳು, ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಹಾಗೂ ಅಭ್ಯರ್ಥಿಗಳ ಪರವಾಗಿ ಯಾರೇ ಇತರರು ಚುನಾವಣಾ ಪ್ರಚಾರ ಸಮಯದ ನಂತರ ಯಾವುದೇ ವಿಧದಲ್ಲಿ ಬಹಿರಂಗ ಚುನಾವಣಾ ಪ್ರಚಾರವನ್ನು ನಡೆಸತಕ್ಕದ್ದಲ್ಲ. ಆದರೆ, ಇತ್ತೀಚಿಗೆ ಚುನಾವಣಾ ಪ್ರಚಾರದ ಬಗ್ಗೆ ಹಲವಾರು ಆಧುನಿಕ ವಿಧಾನಗಳನ್ನು ಅನುಸರಿಸಿ ಪ್ರಚಾರದ ಅವಧಿ ಮುಕ್ತಾಯವಾದ ನಂತರವೂ ಮತದಾರರನ್ನು ಸೆಳೆಯುವ ಪ್ರಯತ್ನ ಮಾಡುತ್ತಿರುತ್ತಾರೆ. ಇಂತಹ ಆಧುನಿಕ ಪ್ರಚಾರದ ವಿಧಾನಗಳನ್ನು ಚುನಾವಣಾ ಪ್ರಚಾರದ ಸಮಯದ ಮುಕ್ತಾಯದ ನಂತರವೂ ಉಪಯೋಗಿಸುವುದನ್ನು ನಿರ್ಬಂಧಿಸುವುದು ಅಗತ್ಯವಿರುವುದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ ಸಂಖ್ಯೆ ರಾಚುಆ 34 ಟಿಜೆಡ್‌ಪಿ 2016, ದಿನಾಂಕ: 10-02-2016.

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 ರ ಚುನಾವಣೆಯು ಶಾಂತಿಯುತವಾಗಿ, ಮುಕ್ತ ಮತ್ತು ನ್ಯಾಯ ಸಮ್ಮತವಾಗಿ ನಡೆಸುವ ಉದ್ದೇಶದಿಂದ ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಅನುಚ್ಛೇದ 243ಕೆ ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ ಪ್ರಚಾರದ ಬಗ್ಗೆ, ಮತದಾನ ಪ್ರಾರಂಭಕ್ಕೆ ನಿಗದಿಪಡಿಸಿದ ಸಮಯದ ಹಿಂದಿನ 48 ಗಂಟೆಗಳ ಅವಧಿಯಲ್ಲಿ ಯಾವುದೇ ರಾಜಕೀಯ ಪಕ್ಷವಾಗಲೀ ಅಥವಾ ಅಭ್ಯರ್ಥಿಗಳಾಗಲೀ ಅಥವಾ ಅವರ ಪರವಾಗಿ ಯಾರೇ ಆಗಲೀ ಈ ಕೆಳಕಂಡವುಗಳನ್ನು ಮಾಡತಕ್ಕದ್ದಲ್ಲವೆಂದು ಈ ಮೂಲಕ ಆದೇಶಿಸಿದೆ.

1) ಚುನಾವಣೆಗೆ ಸಂಬಂಧಿಸಿದ ಸಾರ್ವಜನಿಕ ಸಭೆ, ಸಮಾರಂಭ, ಮೆರವಣಿಗೆ ಇತ್ಯಾದಿಗಳನ್ನು ನಡೆಸತಕ್ಕದ್ದಲ್ಲ.

2) ಮತದಾರರಿಗೆ ಮೊಬೈಲ್ ನಲ್ಲಿ ಎಸ್.ಎಂ.ಎಸ್./ಎಂ.ಎಂ.ಎಸ್./ವಾಟ್ಸಪ್ ಇತ್ಯಾದಿ ಮೂಲಕ ಚುನಾವಣಾ ಪ್ರಚಾರ ಮಾಡತಕ್ಕದ್ದಲ್ಲ.

3) ಎಫ್.ಎಂ.ರೇಡಿಯೋ, ಟಿ.ವಿ. ಚಾನಲ್‌ಗಳ ಮೂಲಕ ಪ್ರಚಾರ ಮಾಡತಕ್ಕದ್ದಲ್ಲ.

4) ಮತದಾರರಿಗೆ ವಿಡಿಯೋ ಕ್ಲಿಪ್ಪಿಂಗ್ಸ್ ಪ್ರದರ್ಶಿಸತಕ್ಕದ್ದಲ್ಲ.

5) ದಿನಪತ್ರಿಕೆಗಳಲ್ಲಿ ಜಾಹಿರಾತು ಹೊರಡಿಸತಕ್ಕದ್ದಲ್ಲ.

6) ಇನ್ನಿತರೆ ದೃಶ್ಯ, ಶ್ರವಣ ಮತ್ತು ಪತ್ರಿಕೆಗಳಲ್ಲಿ ಚುನಾವಣಾ ಪ್ರಚಾರ ಮಾಡತಕ್ಕದ್ದಲ್ಲ.

ಮೇಲ್ಕಂಡ ಅಂಶಗಳ ಉಲ್ಲಂಘನೆಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1951 ರ ಪ್ರಕರಣ 126 ಹಾಗೂ ಭಾರತೀಯ ದಂಡ ಸಂಹಿತೆಯ ಪ್ರಕರಣ 171 ರಡಿ ಶಿಕ್ಷಾರ್ಹ ಅಪರಾಧವಾಗುತ್ತದೆ.

ಆದೇಶಾನುಸಾರ

ಆರ್. ಚಂದ್ರಶೇಖರ್

(ಆರ್.ಚಂದ್ರಶೇಖರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ.

**ಇವರಿಗೆ:**

1. ಎಲ್ಲಾ ಜಿಲ್ಲಾಧಿಕಾರಿಗಳು.
2. ನಿರ್ದೇಶಕರು, ದೂರದರ್ಶನ/ಆಕಾಶವಾಣಿ, ಬೆಂಗಳೂರು.
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.
4. ಪತ್ರಿಕೆಗಳು/ಶ್ರವಣ/ದೃಶ್ಯ ಮಾಧ್ಯಮಗಳು.